# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಗ್ರಾಮೀಣ ಮೀಸಲಾತಿ ಸೌಲಭ್ಯಕ್ಕಾಗಿ ಅಭ್ಯರ್ಥಿಗಳಿಗೆ ಪ್ರಮಾಣ ಪತ್ರ ನೀಡುವ ಬಗ್ಗೆ.

ಓದಲಾಗಿದೆ: (1) ದಿನಾಂಕ 6-1-2001ರ ಅಧಿಸೂಚನೆ ಸಂಖ್ಯೆ: ಸಂವ್ಯಶಾಇ 59 ಶಾಸನ 2000.

(2) ದಿನಾಂಕ 30-1-2001ರ ಅಧಿಸೂಚನೆ ಸಂಖ್ಯೆ: ಸಿಆಸುಇ 01 ಸನೆನಿ 2000 (ಭಾಗ-3).

(3) ದಿನಾಂಕ 13-2-2001ರ ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 8 ಸನೆನಿ 2001.

(4) ದಿನಾಂಕ 14-6-2001ರ ಸುತ್ತೋಲೆ ಸಂಖ್ಯೆ: ಸಿಆಸುಇ 10 ಸನೆನಿ 2001.

ಪ್ರಸ್ತಾವನೆ:

ಮೇಲೆ (1) ರಲ್ಲಿ ಓದಲಾದ ಅಧಿಸೂಚನೆಯಲ್ಲಿ ಕರ್ನಾಟಕ ಗ್ರಾಮೀಣ ಅಭ್ಯರ್ಥಿಗಳಿಗಾಗಿ (ರಾಜ್ಯ ಸಿವಿಲ್ ಸೇವೆಗಳಲ್ಲಿ) ನೇಮಕಾತಿಗಳ ಅಥವಾ ಹುದ್ದೆಗಳ ಮೀಸಲಾತಿ ಅಧಿನಿಯಮ, 2000ನ್ನು (The Karnataka Reservation of Appointments of Posts (In the Civil Services of the State) for Rural Candidates, Act 2000) ರಾಜ್ಯಪತ್ರದಲ್ಲಿ ಪ್ರಕಟಿಸಲಾಗಿತ್ತು. ಮೇಲೆ ಓದಲಾದ ಕ್ರಮಾಂಕ (2) ರಲ್ಲಿರುವ ಅಧಿಸೂಚನೆಯಲ್ಲಿ ಮೇಲ್ಕಂಡ ಅಧಿನಿಯಮವನ್ನು ದಿನಾಂಕ 30-1-2001ರಿಂದ ಜಾರಿಗೊಳಿಸಲಾಗಿತ್ತು. ಮೇಲೆ ಓದಲಾದ ಕ್ರಮಾಂಕ (3) ರಲ್ಲಿರುವ ಸರ್ಕಾರಿ ಆದೇಶದಲ್ಲಿ ಮೇಲ್ಕಂಡ ಅಧಿನಿಯಮದ ಸೆಕ್ಷನ್ 5ರಡಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಗ್ರಾಮೀಣ ಮೀಸಲಾತಿ ಸೌಲಭ್ಯಕ್ಕಾಗಿ ಪ್ರಮಾಣ ಪತ್ರವನ್ನು ಪಡೆಯುವುದಕ್ಕೆ ಸಂಬಂಧಿಸಿದಂತೆ ನಮೂನೆಗಳನ್ನು ಹಾಗೂ ಕಾರ್ಯವಿಧಾನವನ್ನು ನಿಗದಿಪಡಿಸಲಾಗಿತ್ತು.

ಮಾನ್ಯ ಉಚ್ಚ ನ್ಯಾಯಾಲಯವು ರಿಟ್ ಅಪೀಲು ಸಂಖ್ಯೆ: 4456/2004ರಲ್ಲಿ ದಿನಾಂಕ 22-3-2005ರಂದು ನೀಡಿರುವ ತೀರ್ಪಿನಲ್ಲಿ ಗ್ರಾಮೀಣ ಅಭ್ಯರ್ಥಿ ಪ್ರಮಾಣ ಪತ್ರ ನೀಡುವ ಬಗ್ಗೆ ಈ ಕೆಳಕಂಡಂತೆ ಅವಲೋಕನೆ ಮಾಡಿದೆ:

> "The status of the school and whether it was located in a village or not is to be seen at the time when the respondent studied in the school and not on the date of the receipt of applications. If the school was located in

a rural area when the respondent studied he would be eligible as a rural candidate notwithstanding that the village had later been declared a town panchayath. Since the respondent had studied in a rural school he was entitled to be considered against one of the posts reserved for such candidates."

ಮಾನ್ಯ ಉಚ್ಚ ನ್ಯಾಯಾಲಯದ ಮೇಲ್ಕಂಡ ಆದೇಶದ ಹಿನ್ನೆಲೆಯಲ್ಲಿ ಮೇಲೆ ಕ್ರಮಾಂಕ (3) ರಲ್ಲಿ ಓದಲಾದ ಸರ್ಕಾರಿ ಆದೇಶದಲ್ಲಿ ನಿಗದಿಪಡಿಸಲಾಗಿರುವ ನಮೂನೆ-2ನ್ನು ಮಾರ್ಪಡಿಸುವ ಬಗ್ಗೆ ಸರ್ಕಾರ ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ:-

ಸರ್ಕಾರಿ ಆದೇಶ ಸಂಖ್ಯೆ:ಸಿಆಸುಇ 96 ಸೆಸನಿ 2005, ಬೆಂಗಳೂರು, ದಿನಾಂಕ:10-08-2005.

ಕರ್ನಾಟಕ ಗ್ರಾಮೀಣ ಅಭ್ಯರ್ಥಿಗಳಿಗಾಗಿ (ರಾಜ್ಯ ಸಿವಿಲ್ ಸೇವೆಗಳಲ್ಲಿ) ನೇಮಕಾತಿಗಳ ಅಥವಾ ಹುದ್ದೆಗಳ ಮೀಸಲಾತಿ ಅಧಿನಿಯಮ, 2000ದ ಸೆಕ್ಷನ್ 5ರಡಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಗ್ರಾಮೀಣ ಮೀಸಲಾತಿ ಸೌಲಭ್ಯಕ್ಕಾಗಿ ಪ್ರಮಾಣ ಪತ್ರವನ್ನು ಪಡೆಯುವುದಕ್ಕೆ ಸಂಬಂಧಿಸಿದಂತೆ ಮೇಲೆ ಓದಲಾದ ಕ್ರಮಾಂಕ (3) ರಲ್ಲಿ ನಿಗದಿಪಡಿಸಲಾಗಿದ್ದ ಗ್ರಾಮೀಣ ಅಭ್ಯರ್ಥಿ ಪ್ರಮಾಣ ಪತ್ರ ನಮೂನೆ-1 ಹಾಗೂ ನಮೂನೆ-2 ಮತ್ತು ಕಾರ್ಯ ವಿಧಾನದಲ್ಲಿ, ನಮೂನೆ-2ನ್ನು ರದ್ದುಪಡಿಸಿ, ಅದರ ಸ್ಥಾನದಲ್ಲಿ ಈ ಆದೇಶಕ್ಕೆ ಲಗತ್ತಿಸಿದ ನಮೂನೆ-2ನ್ನು ಪ್ರತಿಷ್ಠಾಪಿಸಲಾಗಿದೆ. ಈ ಬದಲಾವಣೆಯು ಭವಿಷ್ಯವರ್ತಿಯಾಗಿ ಜಾರಿಗೆ ಬರುತ್ತದೆ. ಈ ಬದಲಾವಣೆಯನ್ನು ಹೊರತುಪಡಿಸಿ ಮೇಲೆ ಓದಲಾದ ಕ್ರಮಾಂಕ (3) ರಲ್ಲಿರುವ ಆದೇಶದಲ್ಲಿ ನಿಗದಿಪಡಿಸಿರುವ ಇತರ ನಮೂನೆ ಹಾಗೂ ಕಾರ್ಯ ವಿಧಾನಗಳಲ್ಲಿ ಯಾವುದೇ ಬದಲಾವಣೆಗಳು ಇರುವುದಿಲ್ಲವಾದ್ದರಿಂದ, ಅವು ಗಳು ಯಥಾವತ್ತಾಗಿ ಇನ್ನು ಮುಂದೆಯೂ ಜಾರಿಯಲ್ಲಿರುತ್ತವೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

(ಪಿ.ಕೆ. ಬಾಬುರಾವ್)
ಸರ್ಕಾರದ ಅಧೀನ ಕಾರ್ಯದರ್ಶಿ,
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ
(ಸೇವಾ ನಿಯಮಗಳು-1)

ಇವರಿಗೆ

ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು, ಇವರಿಗೆ, ಇದನ್ನು ವಿಶೇಷ ರಾಜ್ಯ ಪತ್ರದಲ್ಲಿ ಪ್ರಕಟಿಸಿ, 2000 ಪ್ರತಿಗಳನ್ನು ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ(ಸೇವಾ ನಿಯಮಗಳು-ಎ) ಗೆ ಒದಗಿಸುವಂತೆ ಕೋರಲಾಗಿದೆ.

ಪ್ರತಿ:

1) ಮುಖ್ಯ ಮಂತ್ರಿಯವರ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು
2) ಎಲ್ಲಾ ಸಚಿವರುಗಳ ಆಪ್ತ ಕಾರ್ಯದರ್ಶಿಗಳು
3) ಸರ್ಕಾರದ ಮುಖ್ಯ ಕಾರ್ಯದರ್ಶಿ/ಅಪರ ಮುಖ್ಯ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿಗಳು
4) ಸರ್ಕಾರದ ಎಲ್ಲಾ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು
5) ಎಲ್ಲ ಜಿಲ್ಲೆಗಳ ಜಿಲ್ಲಾಧಿಕಾರಿಗಳು/ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಹಣಾ ಅಧಿಕಾರಿಗಳು
6) ಎಲ್ಲಾ ಇಲಾಖಾ ಮುಖ್ಯಸ್ಥರುಗಳು
7) ಸರ್ಕಾರದ ಎಲ್ಲಾ ವಿಶೇಷ/ಅಪರ/ಜಂಟಿ/ಉಪ/ಅಧೀನ ಕಾರ್ಯದರ್ಶಿಗಳು
8) ಸಚಿವಾಲಯದ ಎಲ್ಲಾ ಶಾಖೆಗಳ ಶಾಖಾಧಿಕಾರಿಗಳು
9) ಮಹಾಲೇಖಪಾಲಕರು, ಕರ್ನಾಟಕ, ಬೆಂಗಳೂರು-1
10)*ಕಾರ್ಯದರ್ಶಿಗಳು, ಕರ್ನಾಟಕ ವಿಧಾನ ಪರಿಷತ್/ವಿಧಾನ ಸಭೆ, ಬೆಂಗಳೂರು
11)*ನಿಬಂಧಕರು, ಕರ್ನಾಟಕ ಉಚ್ಛ ನ್ಯಾಯಾಲಯ, ಬೆಂಗಳೂರು
12)*ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು
13)*ನಿಬಂಧಕರು, ಕರ್ನಾಟಕ ಆಡಳಿತ ನ್ಯಾಯಮಂಡಳಿ, ಬೆಂಗಳೂರು-38
14)*ಕಾರ್ಯದರ್ಶಿ, ಕರ್ನಾಟಕ ಲೋಕ ಸೇವಾ ಆಯೋಗ, ಬೆಂಗಳೂರು-1
15) ಶಾಖಾ ರಕ್ಷಾ ಕಡತ/ಬಿಡಿ ಪ್ರತಿಗಳು

*(ಪ್ರತ್ಯೇಕ ಮುಖ ಪತ್ರದೊಡನೆ)

ನಂ. ಜಾತಿ/68/05-06 ದಿನಾಂಕ: 24-8-2005.

ಈ ಕುರಿತು ಮುಂದಿನ ಅಗತ್ಯ ಕ್ರಮಕ್ಕಾಗಿ ಕಳುಹಿಸಿದೆ.

ಜಿಲ್ಲಾಧಿಕಾರಿಗಳ ಪರವಾಗಿ
ಹಾಸನ ಜಿಲ್ಲೆ, ಹಾಸನ
24/8 24/8

ಗೆ,
ಎಲ್ಲಾ ತಹಸೀಲ್ದಾರರಿಗೆ